**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 1551/2021**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಶೇಖರಪ್ಪ | ಪ್ರಾಸಾಃ 3 |
| ತಂದೆಯ/ಗಂಡನ ಹೆಸರು | : | ಚಂದ್ರಣ್ಣ | ಚಾಸಾಃ 3 |
| ವಯಸ್ಸು | : | 53 ವರ್ಷ | |
| ಕೆಲಸ | : | ವ್ಯವಸಾಯ | ಸಾ ಪ್ರ ಬೋ |
| ವಾಸ | : | ಗುಂಡಿಮಡು ಗೊಲ್ಲರಹಟ್ಟಿ ಗ್ರಾಮ | ದಿಃ23.04.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ಚಾಸಾ.1 ಮತ್ತು 2 ರವರು ಗೊತ್ತು. ಸಾಕ್ಷಿ ನಿಪಿ.2 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ನಿಪಿ.2(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಹೊಳಲ್ಕೆರೆಯ ಪೊಲೀಸ್ ಠಾಣೆಯಲ್ಲಿ ಸುಮಾರು 3-4 ವರ್ಷಗಳ ಹಿಂದೆ ಮಾಡಿರುತ್ತೇನೆ. ನನ್ನ ಸಮಕ್ಷಮದಲ್ಲಿ ಯಾವುದೇ ಮಹಜರನ್ನು ಜರುಗಿಸಿಲ್ಲ. ನಿಪಿ.2 ರಲ್ಲಿ ಬರೆದಿರುವ ವಿಚಾರಗಳ ಕುರಿತು ನನಗೆ ಗೊತ್ತಿಲ್ಲ. ಸಾಕ್ಷಿ ನಿಪಿ.3 ಮತ್ತು 4 ರ ಛಾಯಾಚಿತ್ರಗಳಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಸದರಿ ಛಾಯಾಚಿತ್ರಗಳನ್ನು ಗುಂಡಿಮಡು ಗ್ರಾಮದ ಸಮೀಪ ತೆಗೆದಿದ್ದರು ಎಂದು ಹೇಳುತ್ತಾರೆ. ಯಾವ ವಿಚಾರಕ್ಕಾಗಿ ಛಾಯಾಚಿತ್ರಗಳನ್ನು ತೆಗೆದಿದ್ದರು ಎಂದು ಗೊತ್ತಿಲ್ಲ. ನನ್ನೊಂದಿಗೆ ಸದರಿ ಸಮಯದಲ್ಲಿ ಇತರೆ ಯಾರೂ ಇರಲಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

2. ದಿನಾಂಕ 15.05.2021 ರಂದು ಅಪಘಾತ ನಡೆದ ಸ್ಥಳವಾದ ಗುಂಡಿಮಡು ಗ್ರಾಮದ ಸಮೀಪ ಎನ್.ಹೆಚ್.13 ರ ರಸ್ತೆಯಲ್ಲಿ ಬೆಳಗ್ಗೆ 10 ರಿಂದ 11 ಗಂಟೆಯವರೆಗೆ ನನ್ನ ಮತ್ತು ಚಾಸಾ.1 ಮತ್ತು 2 ರವರ ಸಮಕ್ಷಮ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿ. ಪಂಚನಾಮೆಯನ್ನು ಜರುಗಿಸಲು ಸ್ಥಳವನ್ನು ಚಾಸಾ.1 ರವರು ತೋರಿಸಿರುತ್ತಾರೆ ಎಂದರೆ ಸರಿ. ಮಹಜರಿನ ಸಮಯದಲ್ಲಿ ನಿಪಿ.3 ಮತ್ತು 4 ರ

ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿ. ಸದರಿ ಸಮಯದಲ್ಲಿ ಮಹಜರಿಗೆ ನನ್ನೊಂದಿಗೆ ಚಾಸಾ.1 ಮತ್ತು 2 ರವರು ಸಹ ಸ್ಥಳದಲ್ಲಿ ಸಹಿ ಮಾಡಿರುತ್ತಾರೆ ಎಂದರೆ ಸರಿ. ಕಚ್ಚಾ ನಕ್ಷೆಯನ್ನು ಸ್ಥಳದಲ್ಲಿ ತಯಾರಿಸಿರುತ್ತಾರೆ ಎಂದರೆ ಗೊತ್ತಿಲ್ಲ. ಕಚ್ಚಾ ನಕ್ಷೆಯನ್ನು ಸ್ಥಳದಲ್ಲಿ ತಯಾರಿಸಿದ್ದರೂ ಕೂಡ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ಶ್ರಿ ಬಿ.ಜೆ.ಎಂ. ವಕೀಲರಿಂದ</u>**

3. ನಿ.ಪಿ.2 ಕ್ಕೆ ಯಾವ ವಿಚಾರವಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನಿಪಿ.2 ರಲ್ಲಿ ಬರೆದಿರುವ ವಿಚಾರಗಳ ಕುರಿತು ನನಗೆ ಗೊತ್ತಿಲ್ಲ. ಪೊಲೀಸರು ಸಹಿ ಮಾಡಿ ಎಂದು ಹೇಳಿದ ಮೇರೆಗೆ ನಾನು ನಿಪಿ.2 ರ ಮಹಜರಿಗೆ ಸಹಿ ಮಾಡಿರುತ್ತೇನೆ. ನಿಪಿ.3 ಮತ್ತು 4 ರ ಛಾಯಾಚಿತ್ರಗಳನ್ನು ಯಾವ ವಿಚಾರಕ್ಕಾಗಿ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ. ಪೊಲೀಸರು ಛಾಯಾಚಿತ್ರ ತೆಗೆಯುವಾಗ ನಿಲ್ಲುವಂತೆ ಹೇಳಿದ್ದು, ಆ ಪ್ರಕಾರ ನಿಂತಿರುತ್ತೇನೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೆ ಮಾಹಿತಿ ಇಲ್ಲ ಎಂದರೆ ಸರಿ.

**ಮರು ವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ